ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2014-15ನೇ ಸಾಲಿನಲ್ಲಿ ಮಹಾತ್ಮಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ ಆವರ್ತಕ ವೆಚ್ಚಗಳಿಗಾಗಿ ಮೂರನೇ ಕಂತಿನ ಅನುದಾನ ಬಿಡುಗಡೆ ಮಾಡುವ - ಕುರಿತು

ಓದಲಾಗಿದೆ : ಕಾರ್ಯನಿರ್ವಾಹಕ ನಿರ್ದೇಶಕರು, ಎಂ.ಜಿ.ಐ.ಆರ್.ಇ.ಡಿ., ಬೆಂಗಳೂರು ರವರ ಪತ್ರ ಸಂಖ್ಯೆ : ಎಂ.ಜಿ.ಐ/ಬಜೆಟ್/73/2013-14/933 ದಿನಾಂಕ 11.11.2014

ಪ್ರಸ್ತಾವನೆ :

2014-15ನೇ ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ಮಹಾತ್ಮ ಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ (MGIRED) ರೂ.200.00 ಲಕ್ಷಗಳನ್ನು ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಒದಗಿಸಲಾಗಿದೆ.

ಓದಲಾದ ಪತ್ರದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು ರವರು 2014-15ನೇ ಸಾಲಿನ 3ನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಕೋರಿರುತ್ತಾರೆ. ಅದರಂತೆ 2014-15ನೇ ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ಸಂಸ್ಥೆಗೆ ನಿಗದಿಪಡಿಸಲಾದ ರೂ. 200.00 ಲಕ್ಷಗಳ ವಾರ್ಷಿಕ ಅನುದಾನದ ಪೈಕಿ ನಿಗದಿಪಡಿಸಲಾದ ಅನುದಾನದಲ್ಲಿ ರೂ.50.00ಲಕ್ಷಗಳನ್ನು ಮೂರನೇ ಕಂತಾಗಿ ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಲೆಕ್ಕ ಶೀರ್ಷಿಕೆ <u>2501-04-105-0-02-059(ಯೋಜನೆ)</u>ಯಡಿ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ/11/ಜೈಅಯೋ/2014 ಬೆಂಗಳೂರು, ದಿನಾಂಕ. 19.[illegible].2014**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ 2014-15ನೇ ಸಾಲಿನಲ್ಲಿ, ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು ರವರಿಗೆ ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಮೂರನೇ ಕಂತಿನ ಅನುದಾನ **ರೂ.50.00ಲಕ್ಷಗಳ (ರೂ. ಐವತ್ತು ಲಕ್ಷಗಳು ಮಾತ್ರ) <u>ಅನುದಾನ ಬಿಡುಗಡೆ ಮಾಡಿದೆ.</u>**

ಸದರಿ ಅನುದಾನವನ್ನು ಲೆಕ್ಕ ಶೀರ್ಷಿಕೆ <u>2501-04-105-0-02-059(ಯೋಜನೆ)</u>ಯಡಿ ಭರಿಸತಕ್ಕದ್ದು.

ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆರವರು ಗ್ರಾಂಟ್-ಇನ್-ಏಡ್ ಬಿಲ್ಲನ್ನು ಸಲ್ಲಿಸಿ, ನಿರ್ದೇಶಕರು (ಗ್ರಾಮೂಸೌ-2) ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿರವರ ಮೇಲು ರುಜು ಪಡೆದು ಖಜಾನೆಯಿಂದ ಅನುದಾನ ಪಡೆಯತಕ್ಕದ್ದು. ಬಿಡುಗಡೆ ಮಾಡಲಾಗಿರುವ ಅನುದಾನಕ್ಕೆ ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿತವಾಗಿ ಸಲ್ಲಿಸುವುದು.

ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಅ.ಟಿ. ಸಂಖ್ಯೆ: ಗ್ರಾಅಪ 679 ಪಿಬಿಎಸ್ 2014 ದಿನಾಂಕ 17.11.2014ರನ್ವಯ ಸಹಮತಿಯನ್ನು ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರುಗಳಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
3. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಉಪ ನಿರ್ದೇಶಕರು, (ತಾಂತ್ರಿಕ) ಗ್ರಾಮೂಸೌ ಕೋಶ, ಗ್ರಾಅಪ ಇಲಾಖೆ.
7. ಉಪ ನಿರ್ದೇಶಕರು, ಟ್ರೆಜರಿ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
8. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.